# ಅನಗತ್ಯ ಕರೆಗಳ ಸಿಮ್‌ಕಾರ್ಡ್ ಕಪ್ಪುಪಟ್ಟಿಗೆ

■ ಶಶಿಕುಮಾರ್ ಸಿ.

ದೇಶದಾದ್ಯಂತ ಸಕ್ರಿಯವಾಗಿರುವ ನಕಲಿ, ಸ್ಕ್ಯಾಮ್ ಮತ್ತು ಸ್ಪ್ಯಾಮ್ ಕರೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹೊಸ ನಿಯಮವನ್ನು ಜಾರಿಗೆ ತಂದಿದ್ದು, ಸೆಪ್ಟೆಂಬರ್ 1ರಿಂದಲೇ ಇದು ಕಾರ್ಯರೂಪಕ್ಕೆ ಬರಲಿದೆ.

ಭಾರತೀಯ ದೂರಸಂಪರ್ಕ ನಿಯಂತ್ರಣ ಪ್ರಾಧಿಕಾರವು (ಟ್ರಾಯ್) ಟೆಲಿಕಾಂ ಕ್ಷೇತ್ರದಲ್ಲಿ ನಡೆಯುತ್ತಿರುವ ವಂಚನೆ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಮುಂದಾಗಿದೆ. ಅದರ ಭಾಗವಾಗಿ, ಅನಗತ್ಯ ಕರೆಗಳಿಗೆ ಬಳಸುತ್ತಿರುವ ಸಿಮ್ ಕಾರ್ಡ್‌ಗಳನ್ನು ಕಪ್ಪುಪಟ್ಟಿಗೆ (ಬ್ಲಾಕ್ ಲಿಸ್ಟ್) ಸೇರಿಸಲಾಗುತ್ತದೆ. ನಕಲಿ ಮತ್ತು ಜಾಹೀರಾತು ಕರೆಗಳಿಂದ ಬಳಕೆದಾರರಿಗೆ ತೊಂದರೆಯಾಗುತ್ತಿರುವುದರಿಂದ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ.

ಹೊಸ ನಿಯಮದನ್ವಯ ಆಯಾ ಟೆಲಿಕಾಂ ಕಂಪನಿಗಳ ಸಿಮ್‌ಕಾರ್ಡ್‌ಗಳ ಮೂಲಕ ಮಾಡುವ ನಕಲಿ ಕರೆಗಳಿಗೆ ಆಯಾ ಕಂಪನಿಗಳೇ ಹೊಣೆಯಾಗಿರಲಿವೆ. ಅಂದರೆ, ನಿರ್ದಿಷ್ಟ ಕಂಪನಿಯ ಸಿಮ್‌ಕಾರ್ಡ್‌ನಿಂದ ಯಾವುದಾದರೂ ನಕಲಿ ಕರೆಗಳು ಸ್ವೀಕಾರವಾದ ಬಗ್ಗೆ ಗ್ರಾಹಕರು ವರದಿ ಮಾಡಿದರೆ, ಆ ಸಂಬಂಧಿತ ಸಮಸ್ಯೆಯನ್ನು ಪರಿಹರಿಸುವ ಮತ್ತು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವ ಜವಾಬ್ದಾರಿಯನ್ನು ಹೊಂದಿರುತ್ತವೆ. ಈ ಬದಲಾವಣೆಯು ಬಳಕೆದಾರರನ್ನು ಕಾಡುತ್ತಿರುವ ನಕಲಿ ಕರೆಗಳ




ಸಂಖ್ಯೆಯನ್ನು ಗಣನೀಯವಾಗಿ ಕಡಿಮೆ ಮಾಡುವ ನಿರೀಕ್ಷೆಯಿದೆ.

### ವಂಚನೆ ವಿರುದ್ಧ ಬ್ರಹ್ಮಾಸ್ತ್ರ

ಟೆಲಿಕಾಂ ಕಂಪನಿಗಳ ಮೇಲೆ ಕಟ್ಟುನಿಟ್ಟಾದ ನಿಯಮಗಳನ್ನು ಜಾರಿಗೊಳಿಸುವ ಮೂಲಕ ದುರುದ್ದೇಶಪೂರಿತ ಚಟುವಟಿಕೆಗಳಿಂದ ಬಳಕೆದಾರರನ್ನು ರಕ್ಷಿಸಲು ಹೊಸ ನಿಯಮ ರೂಪಿಸಲಾಗಿದೆ. ಯಾವುದೇ ವ್ಯಕ್ತಿ ತಮ್ಮ ಮೊಬೈಲ್ ಸಂಖ್ಯೆಯನ್ನು ಟೆಲಿಮಾರ್ಕೆಟಿಂಗ್ ಅಥವಾ ಪ್ರಚಾರದ ಉದ್ದೇಶಗಳಿಗಾಗಿ ಬಳಸಿದರೆ ಅವರ ಸಂಖ್ಯೆಯನ್ನು ಎರಡು ವರ್ಷಗಳವರೆಗೆ ಕಪ್ಪು ಪಟ್ಟಿಗೆ ಸೇರಿಸಲಾಗುತ್ತದೆ.

ವಂಚನೆ ಅಥವಾ ಸ್ಪಾಮ್ ಕರೆಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಹೇಳಿರುವ ಟ್ರಾಯ್, ಪ್ರಚಾರದ ಕರೆಗಳಿಗಾಗಿ ತಮ್ಮ ಸಂಖ್ಯೆಗಳನ್ನು ಬಳಸುವ ವ್ಯಕ್ತಿಗಳಿಗೆ ಇದು ಇನ್ನುಮುಂದೆ ಸಾಧ್ಯವಾಗದು ಎಂದಿದೆ. ಹೊಸ ನಿಯಮಾವಳಿಗಳನ್ನು ಜಾರಿಗೊಳಿಸುವ ಮೂಲಕ ಎಲ್ಲಾ ಬಳಕೆದಾರರಿಗೆ ಸುರಕ್ಷಿತ ಟೆಲಿಕಾಂ ವಾತಾವರಣವನ್ನು ಸೃಷ್ಟಿಸುವ ಗುರಿಯನ್ನು ಪ್ರಾಧಿಕಾರವು ಹೊಂದಿದೆ.

ವಂಚನೆಯ ಸಂದೇಶಗಳನ್ನು ಕಳುಹಿಸಿರುವ ಬಗ್ಗೆ 'ಸಂಚಾರ್ ಸಾಥಿ ಪೋರ್ಟಲ್'ನಲ್ಲಿ ದೂರು ನೀಡಬಹುದು ಅಥವಾ 1909ಗೆ ನೇರವಾಗಿ ಕರೆ ಮಾಡಿ ದೂರು ಸಲ್ಲಿಸಬಹುದು.

sancharsathi.gov.in ವೆಬ್‌ಸೈಟ್‌ನಲ್ಲಿ ಸಿಟಿಜನ್ ಸೆಂಟ್ರಿಕ್ ಸೇವೆ ಆಯ್ಕೆಯನ್ನು ಕ್ಲಿಕ್ಕಿಸಿ. ಅನಂತರ ಟ್ಯಾಬ್‌ನ ಕೆಳಗೆ ನೀಡಲಾದ 'ಚಕ್ಷು' ಆಯ್ಕೆಯನ್ನು ಆರಿಸಿ ವರದಿ ಮಾಡುವಿಕೆ ಮೇಲೆ ಕ್ಲಿಕ್ ಮಾಡಿ. ಡ್ರಾಪ್–ಡೌನ್ ಮೆನುವಿನಿಂದ ವಂಚನೆ ವರ್ಗವನ್ನು ಆಯ್ಕೆ ಮಾಡಿ, ವಂಚಿಸುವ ಉದ್ದೇಶದಿಂದ ಕೂಡಿದ ಸಂದೇಶದ ಅಥವಾ ಕರೆಯ ಸ್ವೀಕಾರಗೊಂಡಿರುವುದರ ಸ್ಕ್ರೀನ್‌ಶಾಟ್ ಅನ್ನು ಲಗತ್ತಿಸಿ. ವಂಚನೆ ಕರೆ, ಸಂದೇಶವನ್ನು ಸ್ವೀಕರಿಸಿದ ಮೊಬೈಲ್ ಸಂಖ್ಯೆಯನ್ನು ನಮೂದಿಸಿ. ಜೊತೆಗೆ ದಿನಾಂಕ ಮತ್ತು ಸಮಯವನ್ನು ನಮೂದಿಸಿ ಮತ್ತು ಅದನ್ನು ವರದಿ ಮಾಡಿ. ಅನಂತರ ನಿಮ್ಮ ವಿವರಗಳನ್ನು ನಮೂದಿಸಿ. ಒಟಿಪಿ ಹಾಕಿ ಪರಿಶೀಲಿಸಿ ಮತ್ತು ದೂರನ್ನು ಸಲ್ಲಿಸಿ. ■

## ವಾಚ್ ಮೂಲಕ ಆನ್‌ಲೈನ್ ಪೇಮೆಂಟ್

ಕೋಟಕ್ ಮಹೀಂದ್ರಾ ಬ್ಯಾಂಕ್ ಲಿಮಿಟೆಡ್ (ಕೆಎಂಬಿಎಲ್/ಕೋಟಕ್) ಮತ್ತು ಜಿಓಕ್ಯೂಐಐ ಸಹಯೋಗದಲ್ಲಿ 'ಕೋಟಕ್–ಜಿಓಕ್ಯೂಐಐ ಸ್ಮಾರ್ಟ್ ವೈಟಲ್ ಪ್ಲಸ್' ಸ್ಮಾರ್ಟ್‌ವಾಚ್ ಬಿಡುಗಡೆ ಮಾಡಿದ್ದು, ಈ ವಾಚ್ ಮೂಲಕ ಪೇಮೆಂಟ್ಸ್ ಮಾಡಬಹುದಾಗಿದೆ.

ರುಪೇ ಆನ್–ದ–ಗೋ ವ್ಯವಸ್ಥೆ ಮೂಲಕ ಕಾರ್ಯನಿರ್ವಹಿಸುವ ಈ ಸ್ಮಾರ್ಟ್ ವಾಚ್ ಮೂಲಕ ಪಿನ್ ಹಾಕದೆಯೇ 5000ವರೆಗಿನ ಕಾಂಟ್ಯಾಕ್ಟ್‌ಲೆಸ್ ಪೇಮೆಂಟ್‌ಗಳನ್ನು ಮಾಡಬಹುದು ಅನ್ನುವುದು ಮತ್ತೊಂದು ವಿಶೇಷ. ಇದರ ಬೆಲೆ ರೂ. 3499.

ಡಿಜಿಟಲ್ ಪೇಮೆಂಟ್ಸ್ ಕ್ಷೇತ್ರದಲ್ಲಿ ಅಗಾಧ ಬೆಳವಣಿಗೆ ಉಂಟಾಗಿದೆ. ಗ್ರಾಹಕರು ಪದೇಪದೇ ಕಡಿಮೆ ಮೊತ್ತಗಳನ್ನು ಪಾವತಿ ಮಾಡಲು ನಗದು ರಹಿತ ಪೇಮೆಂಟ್ ವಿಧಾನವನ್ನೇ ಇಷ್ಟಪಡುತ್ತಾರೆ.



ಅದಕ್ಕಾಗಿಯೇ ಈ ವಾಚ್ ಬಿಡುಗಡೆ ಮಾಡಿದೆ. ಇದರಲ್ಲಿ ಹಣ ವಹಿವಾಟಿಗೆ ನಗದು, ಡೆಬಿಟ್/ಕ್ರೆಡಿಟ್ ಕಾರ್ಡ್‌ಗಳು ಅಥವಾ ಸ್ಮಾರ್ಟ್‌ಫೋನ್ ಬೇಕಾಗಿಲ್ಲ. ಈ ಮೂಲಕ ಸುರಕ್ಷಿತ ಮತ್ತು ಸುಲಭ ಬ್ಯಾಂಕಿಂಗ್ ವ್ಯವಸ್ಥೆಯನ್ನು ಒದಗಿಸಲಾಗಿದೆ.

ಕೋಟಕ್–ಜಿಓಕ್ಯೂಐಐ ಸ್ಮಾರ್ಟ್ ವೈಟಲ್ ಪ್ಲಸ್ ವಾಚ್ ಬಳಸುವ ಬಳಕೆದಾರರು ತಮ್ಮ ರಕ್ತದೊತ್ತಡ, ದೇಹದ ಉಷ್ಣತೆ ಮತ್ತು ಎಸ್‌ಪಿಓ2 ಮಟ್ಟವನ್ನು ಬಳಕೆದಾರರು ತಮ್ಮ ಮಣಿಕಟ್ಟಿನಲ್ಲಿಯೇ ಚೆಕ್ ಮಾಡಬಹುದು. ಗ್ರಾಹಕರು ತಮ್ಮ ಕೋಟಕ್ ಮಹೀಂದ್ರ ಬ್ಯಾಂಕ್‌ನ ಖಾತೆಗಳಿಗೆ ಸುಲಭವಾಗಿ ಸೈನ್ ಇನ್ ಆಗಿ, ಸ್ಮಾರ್ಟ್ ವಾಚ್ ಬಳಸಿಕೊಂಡು ಕಾಂಟ್ಯಾಕ್ಟ್‌ಲೆಸ್ ಪೇಮೆಂಟ್ ಮಾಡಬಹುದು. ಈ ವಿಧಾನವು ಸಾಂಪ್ರದಾಯಿಕ ಕಾಂಟ್ಯಾಕ್ಟ್ ಲೆಸ್ ಕಾರ್ಡ್‌ಗಳು ಮತ್ತು ಮೊಬೈಲ್ ಸಾಧನಗಳಂತೆಯೇ ಅದೇ ಮಟ್ಟದ ಸುರಕ್ಷತೆ ಮತ್ತು ಭದ್ರತೆಯನ್ನು ನೀಡುತ್ತದೆ.

ಎನ್‌ಪಿಸಿಐ ಪರಿಚಯಿಸಿರುವ ಹೊಸ ರುಪೇ ಆನ್–ದ–ಗೋ ಫೀಚರ್ ಬಳಸಿಕೊಂಡು ಕಾಂಟ್ಯಾಕ್ಟ್‌ಲೆಸ್ ಪೇಮೆಂಟ್ ಸೌಲಭ್ಯ ಒದಗಿಸುವ ಈ ವಾಚ್ ಅನ್ನು ಕೋಟಕ್ ಬ್ಯಾಂಕ್ ಗ್ರಾಹಕರು ಬ್ಯಾಂಕಿನ ಮೊಬೈಲ್ ಅಪ್ಲಿಕೇಷನ್ ಅಥವಾ ವೆಬ್‌ಸೈಟ್ ಮೂಲಕ ಖರೀದಿಸಬಹುದು. ಕೋಟಕ್ ಗ್ರಾಹಕರಲ್ಲದವರು ಈ ಸೌಲಭ್ಯವನ್ನು ಪಡೆಯಲು ಕೋಟಕ್‌ನಲ್ಲಿ ಖಾತೆಯನ್ನು ತೆರೆಯಬೇಕಾಗುತ್ತದೆ. ■